ದಯವಿಟ್ಟು ಉತ್ತರಿಸುವರೆ?

1) ಗ್ರಾಮೀಣ ಭಾಗದಲ್ಲಿ ಅನೇಕ ಸಣ್ಣ ಹಳ್ಳಿಗಳಿಗೆ ಘಟ್‌ಬ್ರಿಡ್ಜ್ ಒದಗಿಸಲು ಹಾಗೂ ರಸ್ತೆಗಳ ನಿರ್ಮಾಣ ನಿರ್ವಹಣೆಗೆ ಪ್ರತ್ಯೇಕ ಅನುದಾನ ಒದಗಿಸಿ ಗ್ರಾಮೀಣ ಸೌಕರ್ಯಗಳನ್ನು ಒದಗಿಸಲು ಸರ್ಕಾರ ಕ್ರಮಕೈಗೊಳ್ಳುವುದೇ,

2) ಯಾವಾಗ ಕ್ರಮ ಕೈಗೊಳ್ಳಲಾಗುವುದು?

ಶ್ರೀ ಸಿ ಎಂ ಉದಾಸಿ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಸಚಿವರು)

1) ಕೇಂದ್ರ ಪುರಸ್ಕೃತ ಯೋಜನೆಯಾದ ಪಶ್ಚಿಮ ಘಟ್ಟಗಳ ಅಭಿವೃದ್ಧಿ ಯೋಜನೆಯಡಿ 2006--07 ನೇ ಸಾಲಿನಲ್ಲಿ ಕೊಡಗು, ಉಡುಪಿ, ದಕ್ಷಿಣ ಕನ್ನಡ, ಚಿಕ್ಕಮಗಳೂರು ಜಿಲ್ಲೆಗಳಲ್ಲಿ ಘಟ್‌ಬ್ರಿಡ್ಜ್ ಹಾಗೂ ರಸ್ತೆ ಸುಧಾರಣೆಗಾಗಿ 258 00 ಲಕ್ಷ ರೂಗಳಿಗೆ ವಿಶೇಷ ಯೋಜನೆಗಳನ್ನು ತಯಾರಿಸಿ ಕೇಂದ್ರ ಸರ್ಕಾರಕ್ಕೆ ಅನುಮೋದನೆಗಾಗಿ ಸಲ್ಲಿಸಲಾಗಿದೆ ಸದರಿ ಕಾಮಗಾರಿಗಳಿಗೆ, 2005–06 ನೇ ಸಾಲಿನಲ್ಲಿ ಕೇಂದ್ರ ಸರ್ಕಾರ ಬಿಡುಗಡೆ ಮಾಡಿರುವ ಅನುದಾನದಲ್ಲಿ ಉಳಿಕೆ ಇರುವ ಹಣ ರಾಜ್ಯದಲ್ಲಿ ಉಳಿದಿದ್ದು, ಈ ಅನುದಾನದಲ್ಲಿ ವೆಚ್ಚವನ್ನು ಭರಿಸಲಾಗುವುದು

2) ಕೇಂದ್ರ ಸರ್ಕಾರದಿಂದ ವಿಶೇಷ ಯೋಜನೆಗಳಿಗೆ ಅನುಮೋದನೆ ಪಡೆದ ಕೂಡಲೇ ಕಾಮಗಾರಿಗಳನ್ನು ಅನುಷ್ಠಾನ ಮಾಡಲಾಗುವುದು

1603 (2102) ಶ್ರೀ ಮೋಹನ್ ಕೃಷ್ಣ ಶೆಟ್ಟಿ (ಕುಮಟ) – ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಸಚಿವರು ಈ ಕೆಳಕಂಡ-ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

1) ಗ್ರಾಮೀಣ ಭಾಗದಲ್ಲಿರುವ ಯಾವುದೇ ರಸ್ತೆಗಳ ತುರ್ತು ದುರಸ್ತಿ ಕಾರ್ಯಕ್ಕಾಗಿ ವಾರ್ಷಿಕ ನಿರ್ವಹಣೆ ನಿಧಿ ರದ್ದುಪಡಿಸಿರುವುದರಿಂದ ಸದರಿ ರಸ್ತೆಗಳ ತುರ್ತು ದುರಸ್ತಿ ಕಾಮಗಾರಿಗಳಿಗೆ ತೊಡಕಾಗಿರುವುದನ್ನು ಸರ್ಕಾರ ಮನಗಂಡಿದೆಯೇ,

2) ಮನಗಂಡಿದ್ದಲ್ಲಿ ಈ ಕಾಮಗಾರಿಗಳಿಗೆ ಅನುದಾನ ನೀಡಲಾಗುವುದೇ,

3) ಈ ಕುರಿತು ಯಾವಾಗ ಕ್ರಮ ಕೈಗೊಳ್ಳಲಾಗುವುದು?

ಶ್ರೀ ಸಿ ಎಂ ಉದಾಸಿ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಸಚಿವರು)

1) ಪ್ರಸ್ತುತ ಸಾಲಿನಲ್ಲಿ 12 ನೇ ಹಣಕಾಸು ಆಯೋಗದ ಯೋಜನೆಯಡಿ ಗ್ರಾಮೀಣ ರಸ್ತೆಗಳ ನಿರ್ವಹಣೆಗಾಗಿ ಹಾಗೂ ಮುಖ್ಯ ಮಂತ್ರಿ ಗ್ರಾಮೀಣ ರಸ್ತೆ ಯೋಜನೆಯಡಿ ದುರಸ್ತಿ/ ಅಭಿವೃದ್ಧಿಗಾಗಿ ಅನುದಾನ ಒದಗಿಸಲಾಗುತ್ತಿದೆ

2) & 3) ಅನುದಾನಕ್ಕನುಗುಣವಾಗಿ ನಿಯಮಾನುಸಾರ ಕ್ರಮ ಕೈಗೊಳ್ಳಲಾಗುವುದು

1604 (1976) ಶೀ ಮೋಹನ್ ಪಿ ಸಿ (ಚಿಕ್ಕಪೇಟೆ) – ಮಾನ್ಯ ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೆಂಗಳೂರು ಉತ್ತರ ಹಾಗೂ ದಕ್ಷಿಣ ಜಿಲ್ಲೆಯಲ್ಲಿರುವ ಸರ್ಕಾರಿ ಅನುದಾನಿತ, ಖಾಸಗಿ, ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳ ಸಂಖ್ಯೆ ಎಷ್ಟು,

ಆ) ಈ ಶಾಲೆಗಳಲ್ಲಿರುವ ಶಿಕ್ಷಕರ ಸಂಖ್ಯೆ ಎಷ್ಟು (ವಲಯವಾರು ವಿವರ ನೀಡುವುದು),

ಇ) ಈ ಶಿಕ್ಷಕರಿಗೆ ಕಳೆದ 2 ವರ್ಷಗಳಿಂದ ವೇತನ ದೊರೆಯದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ,

ಈ) ವೇತನ ನೀಡದೇ ಇರಲು ಕಾರಣಗಳೇನು,

ಉ) ರಾಜ್ಯದ ಇತರೆಡೆಗಳಲ್ಲಿ ಸರ್ಕಾರವೇ ಈ ಅನುದಾನಿತ ಶಾಲಾ ಶಿಕ್ಷಕರಿಗೆ ವೇತನ ನೀಡುವ ಅಥವಾ ಬೇರೆ ಸರ್ಕಾರಿ ಶಾಲೆಗಳಿಗೆ ಹೆಚ್ಚುವರಿಯಾಗಿ ಕಳಿಸುವ ಮೂಲಕ ಜೀವನಾಂಶ ಕಲ್ಪಿಸುತ್ತಿರುವ ರೀತಿಯೇ ಈ ವಲಯದ ಶಿಕ್ಷಕರಿಗೂ ಪರ್ಯಾಯ ವ್ಯವಸ್ಥೆ ಕಲ್ಪಿಸುವಲ್ಲಿ ಸರ್ಕಾರದ ನಿಲುವೇನು,

ಊ) ಈ ಅನುದಾನಿತ ಶಾಲೆಗಳ ಶಿಕ್ಷಕರಿಗೆ ತಕ್ಷಣ ವೇತನ ನೀಡುವಲ್ಲಿ ಸರ್ಕಾರ ಕೈಗೊಂಡಿರುವ ಕ್ರಮಗಳೇನು?